# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 03-09-2022 ರಂದು ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ದಿನಾಂಕ: 03-09-2022 ರಂದು ಬೆಳಗ್ಗೆ 11.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-02ರ ವಾರ್ಡ್ ಸಮಿತಿಯ ಮಾನ್ಯ ನೋಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನೆಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ಕೆ.ಜಿ.ಸುಂದರೇಶ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) |
| 02 | ಶ್ರೀ.ನರಸಿಂಹಯ್ಯ | ಕಾರ್ಯದರ್ಶಿಗಳು ಮತ್ತು ಸಹಾಯಕ ಅಭಿಯಂತರರು (ವಾರ್ಡ್ ನಂ-02) |
| 03 | ಡಾ11 ಮಂಜುಳ ಎಸ್ | ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯ (ಗೈರು ಹಾಜರಿ) |
| 04 | ಶ್ರೀ.ಕೆ.ಎನ್. ಬಾಬುರೆಡ್ಡಿ | ಸಹಾಯಕ ಅಭಿಯಂತರರು (ವಿದ್ಯುತ್) |
| 05 | ಶ್ರೀ.ಅಶೋಕ್ .ಎಂ.ಆರ್ | ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ |
| 06 | ಶ್ರೀ.ಬಸವರಾಜ್ ಬಿ.ಟಿ. | ಕಿರಿಯ ಅಭಿಯಂತರರು (ಬೇಸ್ಕಾಂ) |
| 07 | ಶ್ರೀ.ರಂಗಸ್ವಾಮಿ | ರೆವಿನ್ಯೂ ಇನ್ಸ್‌ಪೇಕ್ಟರ್ |
| 08 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 09 | ಶ್ರೀ. ವಿನಯ ಕುಮಾರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 10 | ಶ್ರೀ. ಎನ್. ಶ್ರೀರಾಮ ರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ |
| 11 | ಶ್ರೀ.ದರ್ಶನ್ | ಮಾರ್ಷಲ್ ಸೂಪರ್‌ವೈಸರ್ |
| 12 | ಶ್ರೀ.ಕುಮಾರ್ ಸ್ವಾಮಿ | ಜಾನುವಾರ ಅಧಿಕಾರಿಗಳು |
| 13 | ಶ್ರೀಮತಿ. ನಂದಶ್ರೀ. | ಕಿರಿಯ ಆರೋಗ್ಯ ಪರಿವೀಕ್ಷಕರು |
| 14 | ಶ್ರೀ.ಎಸ್.ಶೇಖರ್ | ಬಿ.ಬಿ.ಎಂ.ಪಿ ಅರಣ್ಯ |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು/ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು |

| | | |
|---|---|---|
| 02 | ಶ್ರೀ. ಅ.ಬ ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |
| 04 | ಶ್ರೀ.ಎ.ಎಸ್.ರಾಜು | ಸ್ಥಳೀಯ ನಿವಾಸಿಗಳು |
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು |
| 06 | ಶ್ರೀ.ವೆಂಕಟೇಶ್ | ಮಾರುತಿನಗರ |
| 07 | ಹರಿನಾಥ | ಸಾರ್ವಜನಿಕರು |
| 08 | ಶಂಕರ್ ನಾಯಕ್ | ನಾಗರ್ಜುನ ಅಪಾರ್ಟ್‌ಮೆಂಟ್ (ಅಧ್ಯಕ್ಷರು) |
| 09 | ವೇಣುಗೋಪಾಲ | ಕೊಂಡಪ್ಪ ಬಡಾವಣೆ |
| 10 | ಮಹದೇವಪ್ಪ ಗುಂಡೂರು | ಕೊಂಡಪ್ಪ ಬಡಾವಣೆ |

ಶ್ರೀ.ನರಸಿಂಹಯ್ಯ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು ವಾರ್ಡ್ ನಂ-02 ರವರು ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರ ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೋಡೆಲ್ ಅಧಿಕಾರಿರವರನ್ನು ಕೋರಲಾಯಿತು.

ಅದರಂತೆ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ: 20-08-2022 ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಿದರು. ಹಾಗೂ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಹಾಗೂ ಈ ಹಿಂದೆ ಕೈಗೊಂಡಿರುವ ಸಭೆಯ ನಡವಳಿಗಳನ್ನು ಸಭೆಯಲ್ಲಿ ವರದಿಯನ್ನು ಒದಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಲ್ಯಾಣ ಕಾರ್ಯಕ್ರಮದಡಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ. ಮಾನ್ಯ ವಿಶೇಷ ಆಯುಕ್ತರು (ಕಲ್ಯಾಣ) ಬಿ.ಬಿ.ಎಂ.ಪಿ ರವರು ಹೊರಡಿಸಿರುವ ಸಾರ್ವಜನಿಕ ಪತ್ರಿಕಾ ಪ್ರಕಟಣೆಯನ್ನು ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಒದಿದರು, ಮತ್ತು ಕಲ್ಯಾಣ ಕಾರ್ಯಕ್ರಮದಡಿ ಪಾಲಿಕೆಯ ವ್ಯಾಪ್ತಿಯಲ್ಲಿ ಸ್ವಂತ ನಿವೇಶನ ಹೊಂದಿರುವವರಿಗೆ ಮನೆ ನಿರ್ಮಾಣ ಮಾಡಿಕೊಳ್ಳಲು ರೂ.5.00 ಲಕ್ಷಗಳ ಸಹಾಯಧನ. ನೀಡಲಾಗುತ್ತಿದ್ದು, ದಿನಾಂಕ: 20-08-2022 ರಿಂದ ದಿನಾಂಕ:19-09-2022 ರವರೆಗೆ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಎಂಬುದಾಗಿ ಸಭೆಯಲ್ಲಿ ಹಾಜರಾಗಿರುವ ಎಲ್ಲಾ ಸಾರ್ವಜನಿಕರಿಗೆ ಆನ್‌ಲೈನ್‌ಲ್ಲಿ ಅರ್ಜಿಗಳನ್ನು ಸಲ್ಲಿಸುವಂತೆ ಮತ್ತೊಮ್ಮೆ ತಿಳಿಸಲಾಯಿತು. | | |
| | ಮಾನ್ಯ ವಿಶೇಷ ಆಯುಕ್ತರು (ಆಡಳಿತ/ ಚುನಾವಣೆ) ಬಿ.ಬಿ.ಎಂ.ಪಿ ರವರ ಆದೇಶದ ಪತ್ರದಂತೆ ಮಾಹೆಯಾನ ನಡೆಯುವ ವಾರ್ಡ್ ಕಮಿಟಿ ಸಭೆಗಳಲ್ಲಿ ಚುನಾವಣೆ ಸಂಬಂಧಿತ ಅಂಶಗಳನ್ನು ಸಹ ತಪ್ಪದೇ ಸಭೆಯ ಕಾರ್ಯಕ್ರಮಗಳಲ್ಲಿ ಸೇರ್ಪಡಿಸಿಕೊಂಡು ಚರ್ಚಿಸಿ ಕ್ರಮವಹಿಸುವ ಕುರಿತು ಆಧೇಶಿದ್ದು, ಅದರಂತೆ ನೋಡೆಲ್ ಅಧಿಕಾರಿಗಳು ಈ ಕೆಳಕಂಡ ಅಂಶಗಳನ್ನು ಸಭೆಯಲ್ಲಿ ಓದಲಾಯಿತು.<br>1. ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ಸಂಬಂಧ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಅಕ್ಷೇಪಣೆಗಳನ್ನು ಸಲ್ಲಿಸಲು ಅವಧಿಯನ್ನು ಇನ್ನು 7 ದಿನಗಳವರೆಗೆ ವಿಸ್ತರಿಸಲಾಗಿರುವ ಕುರಿತು.<br>2. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಗುರುತಿನ ಚೀಟಿಗೆ ಆಧಾರ್ | | |

| | | | |
|---|---|---|---|
| | ಲಿಂಕ್ ಮಾಡುವ ಕುರಿತು ( ನಮೂನೆ-6ಬಿ) ಮತ್ತು<br>3. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯ ಚಟುವಟಿಕೆಗಳ ಕುರಿತು. | | |
| 02 | ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಕಾಮಾಕ್ಷಮ್ಮ ಬಡಾವಣೆ ಮತ್ತು ಕೊಂಡಪ್ಪ ಬಡಾವಣೆಗಳಲ್ಲಿ ಸೊಳ್ಳೆಗಳ ಕಾಟ ಜಾಸ್ತಿಯಾಗಿರುವುದಾಗಿ ಇದನ್ನು ತಡೆಗಟ್ಟಲು ಸೊಳ್ಳೆನಿಯಂತ್ರಣ ಔಷದಿ ಸಿಂಪಡಿಸಬೇಕೆಂದು ಮತ್ತೊಮ್ಮೆ ಸಭೆಯಲ್ಲಿ ಶ್ರೀ.ಎ.ಎಸ್.ರಾಜು ರವರು ಕೋರಿದರು. | ಇದಕ್ಕೆ ಸಂಬಂಧಿಸಿದಂತೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷರಾದ ಶ್ರೀಮತಿ. ಸುನಂದಮ್ಮ ರವರಿಗೆ ಮಾತನಾಡಿ ಔಷದಿ ಸಿಂಪಡಿಸುವ ವಿಚಾರಕ್ಕೆ ಸಂಬಂದಿಸಿದಂತೆ ಕೇಂದ್ರ ಕಛೇರಿಯಲ್ಲಿ ಟೆಂಡರ್ ಕರೆದಿದ್ದು, ಟೆಂಡರ್ ಪ್ರಗತಿಯಲ್ಲಿರುತ್ತದೆ. ಸದರಿ ಟೆಂಡರ್ ಪೂರ್ಣಗೊಂಡ ನಂತರ ಏಜೆನ್ಸಿಯವರು ನಿಗಧಿತ ಸಮಯದಲ್ಲಿ ಔಷದಿ ಸಿಂಪಡಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-02. |
| 03 | ವಾರ್ಡ್ ನಂ -02ರಲ್ಲಿ ಪ್ಲಾಸ್ಟಿಕ್ ಸೀಜ್ ಮಾಡುತ್ತಿಲ್ಲವೆಂದು ಸಭೆಯಲ್ಲಿ ಸಾರ್ವಜನಿಕರು ಅಕ್ಷೇಪಣೆ ವ್ಯಕ್ತಪಡಿಸಿದರು. | ಈ ವಿಷಯಕ್ಕೆ ಸಂಬಂದಿಸಿದಂತೆ ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ಸುನಂದಮ್ಮ ಹಿರಿಯ ಆರೋಗ್ಯ ಪರಿವೀಕ್ಷರರು ಮಾತನಾಡಿ ಈಗಾಗಲೇ ಹಂತ ಹಂತವಾಗಿ ಪ್ಲಾಸ್ಟಿಕ್ ಸೀಜ್ ಮಾಡುತ್ತಿದ್ದು, ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-02. |
| 04 | ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಈಗಾಗಲೇ ಇರುವ ಬತ್ತಿ ಹೋಗಿರುವ ಬೋರ್‌ವೆಲ್‌ಗಳಲ್ಲಿ ಪಂಪು ಮೋಟಾರ್‌ಗಳನ್ನು ತೆಗೆದು ಬೇರೆ ಕಡೆ ನೀರುವ ಇರುವ ಕಡೆ ಕೊಳವೆ ಭಾವಿಗಳಲ್ಲಿ ಪಂಪು ಮೊಟಾರ್ ಅಳವಡಿಸಲು ಸಾರ್ವಜನಿಕರು ಸಭೆಯಲ್ಲಿ ಕೋರಿರುತ್ತಾರೆ. | ಇದಕ್ಕೆ ಸಂಬಂಧಿಸಿದಂತೆ ಸಹಾಯಕ ಅಭಿಯಂತರರು ವಿನಯ್ ಕುಮಾರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಮಾತನಾಡಿ ಸದರಿ ಬೊರ್‌ವೆಲ್‌ಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು. | ವಿನಯ ಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 05 | ಚೌಡೇಶ್ವರಿ ದೇವಸ್ಥಾನದ ಹತ್ತಿರ ಇರುವ ಬೊರ್‌ವೆಲ್ ಹತ್ತಿರ ಬ್ಲಾಕ್ ಸ್ಪಾಟ್ ಇದ್ದು, ಹಾಗೂ ಈ ಜಾಗದಲ್ಲಿ ಕಸವನ್ನು ಹಾಕದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಎ.ಎಸ್.ರಾಜು ಸಂಬಂದಿಸಿದ ಹಿರಿಯ ಆರೋಗ್ಯ ಅಧಿಕಾರಿಗಳಿಗೆ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಈ ಜಾಗದಲ್ಲಿ ಕಸವನ್ನು ಹಾಕದಂತೆ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು. | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -2 |
| 04 | ಕಾಮಾಕ್ಷಮ್ಮ ಬಡಾವಣೆಯಲ್ಲಿರುವ ಅಂಗನವಾಡಿ ಕೇಂದ್ರದ ಹತ್ತಿರ ಚರಂಡಿ ಬ್ಲಾಕ್ ಆಗಿದ್ದು, ಚರಂಡಿಯಲ್ಲಿ ತುಂಬಿರುವ ಹೂಳನ್ನು ತೆಗೆಯಬೇಕೆಂದು ಶ್ರೀಮತಿ. ಜ್ಯೋತಿರವರು ಸಭೆಯಲ್ಲಿ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ವಾರ್ಡ್ - 02ರ ಅಭಿಯಂತರರು ಮಾತನಾಡಿ ಸ್ಥಳ ಪರಿಶೀಲನೆ ಮಾಡಿ ಟ್ರಾಕ್ಟರ್ ಮತ್ತು ಲೆಬರ್ ಮುಖಾಂತರ ಚರಂಡಿಯನ್ನು ತುಂಬಿರುವ ಹೂಳನ್ನು ತೆಗೆಯಲಾಗುವುದು ಎಂಬುದಾಗಿ ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ ನಂ-02. |

| | | | |
|---|---|---|---|
| 05 | ಪಂಪ್ ಹೌಸ್ ನಲ್ಲಿರುವ ಸಂಪ್‌ಅನ್ನು ಸ್ವಚ್ಛತೆ ಮಾಡಿಲ್ಲವೆಂದು ಸಭೆಯಲ್ಲಿ ಸಾರ್ವಜನಿಕರು ಅಕ್ಷೇಪಣೆ ವ್ಯಕ್ತಪಡಿಸಿದರು. | ಇದಕ್ಕೆ ಸಂಬಂದಿಸಿದಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಾದ ಶ್ರೀ. ವಿನಯ ಕುಮಾರ್ ರವರು ಮಾತನಾಡಿ ಸ್ಥಳ ಪರಿಶೀಲನೆ ಮಾಡಿ ಸಂಪನ್ನು ಸ್ವಚ್ಛತೆ ಮಾಡಲು ಕ್ರಮ ವಹಿಸಲಾಗುವುದೆಂದು ಸಬೆಗೆ ತಿಳಿಸಿದರು. | ವಿನಯ ಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 06 | ನಾಗಾರ್ಜುನ ಅಪಾರ್ಟ್‌ಮೆಂಟ್ ನಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಲು ಮತ್ತು ಬೀದಿ ದೀಪಗಳ ನಿರ್ವಹಣೆ ಹಾಗೂ ಬೇಸ್ಕಾಂ ನಿಂದ ತೆಗೆದಿರುವ ವಿದ್ಯುತ್ ಕಂಭಗಳನ್ನು ಸ್ಥಳಾಂತರಿಸಿವುದಿಲ್ಲ ಎಂದು ಸಭೆಯಲ್ಲಿ ಶ್ರೀ.ಶಂಕರ್ ನಾಯಕ್ ರವರು ನಾಗಾರ್ಜುನ ಅಪಾರ್ಟ್‌ಮೆಂಟ್‌ನ ಅದ್ಯಕ್ಷರು ಸಭೆಯಲ್ಲಿ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ಸ್ಥಳ ಪರಿಶೀಲನೆ ಮಾಡಿ ಸಮಸ್ಯೆಯನ್ನು ಪರಿಹರಿಸುವುದಾಗಿ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಹಾಗೂ ಬೇಸ್ಕಾಂ ಅಧಿಕಾರಿಗಳು ಮಾತನಾಡಿ ಸ್ಥಳ ಪರಿಶೀಲನೆ ಮಾಡಿ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು. | ವಿನಯ ಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಮತ್ತು ಶ್ರೀ.ಬಸವರಾಜ್ ಬೇಸ್ಕಾಂ ಅಧಿಕಾರಿಗಳು |
| 06 | ನಾಗೇನಹಳ್ಳಿ ಮುಖ್ಯರಸ್ತೆಯಲ್ಲಿ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿಗಳನ್ನು ತೆರವುಗೊಳಿಸಬೇಕೆಂದು ಸ್ಥಳೀಯ ನಿವಾಸಿಯಾದ ಶ್ರೀ.ಶಿವಕುಮಾರ್ ರವರು ಸಭೆಯಲ್ಲಿ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ವಾರ್ಡ್ ನಂ-02 ರವರು ಮಾತನಾಡಿ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿಗಳನ್ನು ತೆರವುಗೊಳಿಸಲಾಗುವುದು ಎಂಬುದಾಗಿ ಸಭೆಗೆ ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ ನಂ-02. |
| 07 | ಪುಟ್ಟೇನಹಳ್ಳಿ ಜನತಾ ಕಾಲೋನಿಯಲ್ಲಿ ಮಳೆ ನೀರು ಮನೆಗಳಿಗೆ ನುಗ್ಗುತ್ತಿರುವ ಬಗ್ಗೆ ಮತ್ತು ದೇವಸ್ಥಾನದ ಗೋಡೆಯನ್ನು ತೆರವುಗೊಳಿಸಬೇಕೆಂದು ಸ್ಥಳೀಯ ಸಾರ್ವಜನಿಕರು ಸಭೆಗೆ ದೂರನ್ನು ಸಲ್ಲಿಸಿದರು. | ಇದಕ್ಕೆ ಸಂಬಂದಿಸಿದಂತೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ವಾರ್ಡ್ ನಂ-02 ರವರು ಮಾತನಾಡಿ ಪುಟ್ಟೇನಹಳ್ಳಿ ಜನತಾ ಕಾಲೋನಿಯಲ್ಲಿರುವ ಮೋರಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ಮಳೆ ನೀರು ಚರಂಢಿಗಳಲ್ಲಿ ಸರಾಗವಾಗಿ ಹರಿಯುವಂತೆ ಮಾಡಲಾಗುವುದೆಂದು ಸಭೆಗೆ ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ ನಂ-02. |

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ.ನರಸಿಂಹಯ್ಯ
ಸಹಾಯಕ ಅಭಿಯಂತರರು

ಶ್ರೀ.ಕೆ.ಜಿ.ಸುಂದರೇಶ್
ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ-02.

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.

2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ಯಲಹಂಕ ವಿಭಾಗ/ವಿದ್ಯುತ್/ರಸ್ತೆ ಮತ್ತು ಮೂಲಭೂತ ಸೌಕಾರ್ಯ/ಯೋಜನೆ/ಕೆರೆಗಳು/ ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ/ ವಿದ್ಯುತ್/ ಬೇಸ್ಕಾಂ/ ಬಿಡಬ್ಲ್ಯೂ.ಎಸ್.ಎಸ್.ಬಿ/ಬೋರೆವೆಲ್ ಡಿವಿಷನ್/ ಯಲಹಂಕ ವಲ್ಲಯರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ/ಜಾಹಿರಾತು ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
7. ಆರಕ್ಷಕ ನೀರಿಕ್ಷಕರು ಯಲಹಂಕ ಪೊಲೀಸ್ ಠಾಣೆ ಸಂಚಾರಿ/ ಕಾನೂನು ಸುವ್ಯವಸ್ಥೆ/ ಯಲಹಂಕ ಬೆಂಗಳೂರು ರವರ ಸೂಕ್ತ ಕ್ರಮಕ್ಕಾಗಿ.
8. ಜಾನುವಾರಿ ಅಧಿಕಾರಿಗಳು ಪಶುಪಾಲನೆ ವಿಭಾಗ ಯಲಹಂಕ ವಲಯ ರವರ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕರು ತೋಟಗಾರಿಕೆ ಇಲಾಖೆ ಬಿ.ಬಿ.ಎಂ.ಪಿ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
10. ಡಿಪೋ ಮ್ಯಾನೇಜರ್ ಡಿಪೊ –13 ಪುಟ್ಟೇನಹಳ್ಳಿ ಡಿಪೋ ಯಲಹಂಕ ಬೆಂಗಳೂರು ಸೂಕ್ತ ಕ್ರಮಕ್ಕಾಗಿ.
11. ಕಛೇರಿ ಕಡತಕ್ಕೆ.